ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 20ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) **ವರ್ಗಾವಣೆಗೊಂಡ ಪ್ರಶ್ನೆ:–**

ದಿನಾಂಕ: 14.12.2021ರ 2ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ದೊಡ್ಡಗೌಡರ ಮಹಾಂತೇಶ್ ಬಸವಂತರಾಯ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 22(163) : ಮಾನ್ಯ ಕಂದಾಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

2. ಶಾಸನ ರಚನೆ

<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು</u>

1. ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2021ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 2/ ..

3. ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಡಾ. ಅಶ್ವಥ್ ನಾರಾಯಣ ಸಿ.ಎನ್. (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–

ಅ) 2021ನೇ ಸಾಲಿನ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಶ್ರೀ ಬಿ.ಸಿ. ಪಾಟೀಲ್ (ಮಾನ್ಯ ಕೃಷಿ ಸಚಿವರು) ಅವರು:–

ಅ) 2021ನೇ ಸಾಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಶ್ರೀ ಬಿ.ಎ. ಬಸವರಾಜ (ಮಾನ್ಯ ನಗರಾಭಿವೃದ್ಧಿ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

7. ಡಾ. ಕೆ. ಸುಧಾಕರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

8. ಶ್ರೀ ಬಿ.ಸಿ. ನಾಗೇಶ್ (ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/ ..

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ವಿ. ಮುನಿಯಪ್ಪ, ಪಿ.ಟಿ. ಪರಮೇಶ್ವರ್ ನಾಯಕ್, ಟಿ. ರಘುಮೂರ್ತಿ, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆ, ರಸ್ತೆ, ಸೇತುವೆ, ಸರ್ಕಾರಿ ಕಟ್ಟಡಗಳು, ಸಾರ್ವಜನಿಕ ಮನೆಗಳು ಹಾನಿಯಾಗಿದ್ದು, ಜನ ಜಾನುವಾರುಗಳ ಪ್ರಾಣ ಹಾನಿಯಾಗಿರುವುದರಿಂದ ರೈತರು ಹಾಗೂ ರಾಜ್ಯದ ಜನತೆ ಸಂಕಷ್ಟದಲ್ಲಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ, ಬೆಳ್ಳಿ ಪ್ರಕಾಶ್, ಆರ್. ಮಂಜುನಾಥ್, ಶ್ರೀಮತಿ ಕೆ. ಪೂರ್ಣಿಮ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಗೊಲ್ಲ ಸಮುದಾಯದ ಕಾಡುಗೊಲ್ಲ ಉಪ ಪಂಗಡಗಳನ್ನು ಎಸ್.ಟಿ. ಸಮುದಾಯಕ್ಕೆ ಸೇರಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಕೆ. ಶ್ರೀನಿವಾಸಗೌಡ, ಕೆ.ಎಸ್. ಲಿಂಗೇಶ್, ಡಾ. ಕೆ. ಅನ್ನದಾನಿ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಕೋಟಿ ರೂಪಾಯಿಗಳ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಕೆ.ಆರ್. ರಮೇಶ್ ಕುಮಾರ್, ಹೆಚ್.ಕೆ. ಪಾಟೀಲ್, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಡಾ. ಅಜಯ್ ಧರ್ಮಸಿಂಗ್ ಹಾಗೂ ಇತರರು** – ಕೋವಿಡ್ ಸಂದರ್ಭದಲ್ಲಿ ರಾಜ್ಯದಲ್ಲಿ ಎ.ಪಿ.ಎಂ.ಸಿ. ಕಾಯ್ದೆ, ಭೂ ಸುಧಾರಣಾ ಕಾಯ್ದೆ ಮತ್ತು ಜಾನುವಾರು ಹತ್ಯಾ ನಿಷೇಧ ಕಾಯ್ದೆಗಳನ್ನು ಹಿಂಪಡೆಯಬೇಕೆಂದು ರೈತರು ಪ್ರತಿಭಟಿಸುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4. ಗಮನ ಸೆಳೆಯುವ ಸೂಚನೆಗಳು

1) **ಡಾ. ಜಿ. ಪರಮೇಶ್ವರ್ ಅವರು** – ರಾಜ್ಯದ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳಲ್ಲಿ ವಿಶೇಷವಾಗಿ ಮೀಸಲು ಕ್ಷೇತ್ರಗಳ ಜನರ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನವನ್ನು ಮತ್ತು ಗುರಿಯ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

... 4/ ..

2) **ಶ್ರೀ ಎಂ. ಶ್ರೀನಿವಾಸ್ ಅವರು** – ಮಂಡ್ಯದ ತಹಶೀಲ್ದಾರ್‌ರವರು ದಾಳಿ ನಡೆಸಿ ವಶಪಡಿಸಿಕೊಂಡಿದ್ದ ಅಕ್ರಮ ಅಕ್ಕಿ ಚೀಲಗಳು ನಾಪತ್ತೆಯಾಗಿರುವ ಪ್ರಕರಣವನ್ನು ಪೊಲೀಸರು ಮುಚ್ಚಿಹಾಕಲು ಪ್ರಯತ್ನಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

3) **ಶ್ರೀ ಡಿ.ಎಸ್. ಹೂಲಗೇರಿ ಮತ್ತು ಶ್ರೀ ಬಸನಗೌಡ ದದ್ದಲ್ ಅವರುಗಳು** – 2021–22ನೇ ಸಾಲಿನಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಹಂಚಿಕೆಯಾಗಿರುವ ಅನುದಾನವನ್ನು ಹಿಂಪಡೆದಿರುವ ಬಗ್ಗೆ ಹಾಗೂ ಹಿಂಪಡೆದಿರುವ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಕೆ.ಆರ್. ರಮೇಶ್ ಕುಮಾರ್, ಶ್ರೀ ಕೃಷ್ಣ ಬೈರೇಗೌಡ, ಶ್ರೀ ಟಿ. ವೆಂಕಟರಮಣಯ್ಯ ಮತ್ತು ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಮತ್ತು ಇತರರು – ಕೋಲಾರ, ಚಿಕ್ಕಬಳ್ಳಾಪುರ** ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಎತ್ತಿನಹೊಳೆ ಯೋಜನೆಯ ಅನುಷ್ಠಾನದ ನಿರ್ಲಕ್ಷ್ಯ ಹಾಗೂ ವಿಳಂಬದ ಬಗ್ಗೆ ಹಾಗೂ ಯೋಜನೆಯ ಅವಶ್ಯಕ ಅಂಶಗಳಾದ ಜಲಾಶಯ ನಿರ್ಮಾಣ ಹಾಗೂ ಇತರೆ ಕಾಮಗಾರಿಗಳು ಸಂಪೂರ್ಣವಾಗಿ ಸ್ಥಗಿತವಾಗಿರುವುದರಿಂದ ಸ್ವಚ್ಛ ಕುಡಿಯುವ ನೀರು ಮರೀಚಿಕೆಯಾಗಿದ್ದು, ಆ ಭಾಗದ ಜನರುಗಳಿಗೆ ಅನ್ಯಾಯವಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

5) **ಡಾ. ದೇವಾನಂದ್ ಫುಲಸಿಂಗ್ ಚವ್ಹಾಣ್ ಅವರು** – ಕಳೆದ ಕೆಲವು ದಶಕಗಳಿಂದ ಪ್ರತಿ ವರ್ಷ ಸಂಭವಿಸುತ್ತಿರುವ ಪ್ರಕೃತಿ ವಿಕೋಪದಿಂದಾಗಿ ವಿಜಯಪುರ ಜಿಲ್ಲೆಯ ಜನರು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ಈ ಕುರಿತಂತೆ ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಡಾ. ಅಂಜಲಿ ಹೇಮಂತ್ ನಿಂಬಾಳ್ಕರ್ ಅವರು** – ಖಾನಾಪುರ ತಾಲ್ಲೂಕಿನಲ್ಲಿ ಅಕಾಲಿಕ ಮಳೆಯಿಂದ ಹಾನಿಗೊಂಡಿರುವ ಭತ್ತದ ಬೆಳೆಗೆ ವೈಜ್ಞಾನಿಕವಾಗಿ ಪರಾಮರ್ಶಿಸಿ ಖರ್ಚನ್ನು ಆಧರಿಸಿ ಪರಿಹಾರ ನಿಗದಿಪಡಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಡಿ.ಸಿ. ಗೌರಿಶಂಕರ್ ಅವರು** – ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಮಹಿಳೆಯರಿಗೆ ಮತ್ತು ಸಾರ್ವಜನಿಕ ಆಸ್ತಿ ಪಾಸ್ತಿಗಳಿಗೆ ಹಾನಿಯುಂಟಾಗುತ್ತಿದ್ದು, ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ವಿಫಲವಾಗಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8) **ಶ್ರೀ ಸುನೀಲ್ ಬಿಳಿಯ ನಾಯ್ಕ್ ಅವರು** – ರಾಜ್ಯಾದ್ಯಂತ ಹಾಗೂ ಹೊನ್ನಾವಳಿ ತಾಲ್ಲೂಕು ಪಟ್ಟಣ ಪಂಚಾಯತಿ ಕಾರ್ಯಾಲಯದಲ್ಲಿ ನೀರು ಸರಬರಾಜು ಯೋಜನೆ ನಿರ್ವಹಣೆ ಕಾರ್ಯನಿರ್ವಹಿಸುತ್ತಿರುವವರನ್ನು ಕಿರಿಯ ಇಂಜಿನಿಯರ್ ಆಗಿ 2003ರಲ್ಲಿ ನೇಮಕಗೊಳಿಸಿ ಪಟ್ಟಣ ಪಂಚಾಯತ್‌ನ್ನು ಕೆ.ಎಂ.ಆರ್.ಪಿ. ಯೋಜನೆಯಡಿ ಸೇರ್ಪಡೆಗೊಳಿಸಿ ಪಟ್ಟಣ ವ್ಯಾಪ್ತಿಯ ಎಲ್ಲಾ ಆಸ್ತಿಗಳನ್ನು ಭೌತಿಕವಾಗಿ ಸರ್ವೇ ಮಾಡಿ ದಾಖಲಿಸಲು ನೋಡಲ್ ಇಂಜಿನಿಯರ್ ಆಗಿ ದಿನಕೂಲಿ ನಿಯಮದ ಮೇರೆಗೆ ನೇಮಕ ಮಾಡಿ ಎರಡು ಹುದ್ದೆಯಲ್ಲಿ ಇಂಜಿನಿಯರ್/ನೋಡಲ್ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸಿರುವವರನ್ನು ಕೆಲಸದಿಂದ ತೆಗೆದು ಹಾಕಿರುವುದನ್ನು ರದ್ದುಪಡಿಸಿ ನೌಕರರ ಹಿಂದಿನ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಖಾಯಂಗೊಳಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

... 5/ ..

9) **ಡಾ. ಕೆ. ಶ್ರೀನಿವಾಸಮೂರ್ತಿ ಅವರು** – ನೆಲಮಂಗಲ ವಿಧಾನಸಭಾ ಕ್ಷೇತ್ರದ ದಾಬಸ್ ಪೇಟೆ ಠಾಣೆ ವ್ಯಾಪ್ತಿಯಲ್ಲಿ ನಡೆದ ಅಪಘಾತವನ್ನು ಸರಿಯಾಗಿ ವಿಚಾರಣೆ ಮಾಡದೆ ಕಾರು ಚಾಲಕ ಮತ್ತು ಮಾಲೀಕರ ವಿರುದ್ಧ ಅಲ್ಲಿನ ಸಬ್ ಇನ್ಸ್‌ಪೆಕ್ಟರ್ ರವರು ಸುಳ್ಳು ದೂರು ದಾಖಲಿಸಿ ಜೈಲಿಗೆ ಕಳುಹಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

10) **ಶ್ರೀ ಮಹಾದೇವಪ್ಪ ಶಿವಲಿಂಗಪ್ಪ ಯಾದವಾಡ ಅವರು** – ಶ್ರೀ ಶಿವಸಾಗರ ಸಕ್ಕರೆ ಕಾರ್ಖಾನೆಯು ಕಬ್ಬಿನ ಬಿಲ್ಲಿನ ಬಾಕಿಯನ್ನು ಪಾವತಿಸದೇ ಇರುವುದರಿಂದ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಕೈಮಗ್ಗ ಮತ್ತು ಜವಳಿ ಇಲಾಖೆ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯುವುದು.

11) **ಶ್ರೀ ಹೆಚ್.ಕೆ ಪಾಟೀಲ ಅವರು** – ಗದಗ–ಬೆಟಗೇರಿ ಅವಳಿ ನಗರದ ಮುಖ್ಯರಸ್ತೆಯ ಸಿ.ಟಿ.ಎಸ್. ಸಂಖ್ಯೆ–4062 ರಲ್ಲಿ ತಾರಾಲಯ ಹಾಗೂ ವಿಜ್ಞಾನ ಕೇಂದ್ರ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

12) **ಶ್ರೀ ಸುರೇಶಗೌಡ ಅವರು** – ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೈತರುಗಳ ಪಹಣಿಯಲ್ಲಿ ನಮೂದಾಗಿರುವ ತಪ್ಪುಗಳನ್ನು ಸರಿಪಡಿಸುವ ಬಗ್ಗೆ ಹಾಗೂ ತಾಲ್ಲೂಕು ಕಛೇರಿಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೇ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm